KARNATAKA LEGISLATIVE ASSEMBLY RESEARCH AND REFERENCE BRANCH
PAPER CLIPPING
DEPARTMENT / SUBJECT:
NAME OF THE NEWSPAPER:
DATE: 19/6/20

# ಕೊರೊನಾ ನಿಯಂತ್ರಣಕ್ಕಿರಲಿ ಸಹಕಾರ

ಸಂ.ಕ. ಸಮಾಚಾರ ಬೆಂಗಳೂರು

ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಕೋವಿಡ್ ಸೋಂಕು ಒಬ್ಬರಿಂದ ಒಬ್ಬರಿಗೆ ಹಬ್ಬದಂತೆ ನಿಯಂತ್ರಿಸಲು ಸರ್ಕಾರದ ಜತೆ ಸಾರ್ವಜನಿಕರು ಕೈಜೋಡಿಸಬೇಕೆಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮನವಿ ಮಾಡಿದ್ದಾರೆ.

ಬಿಬಿಎಂಪಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಸೋಂಕು ಹರಡುವಿಕೆ ತಡೆಯಲು ಹಮ್ಮಿಕೊಂಡಿದ್ದ ಮಾಸ್ಕ್ ದಿನಾಚರಣೆ ಜನಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಕೊರೊನಾ ನಿಯಂತ್ರಿಸಲು ಸಾಕಷ್ಟು ತ್ವರಿತವಾದ ಕ್ರಮಗಳನ್ನು ಕೈಗೊಂಡಿದೆ. ಕೇವಲ ಸರ್ಕಾರದಿಂದ ಮಾತ್ರ ಇದು ಸಾಧ್ಯವಿಲ್ಲ. ನಮ್ಮ ಜತೆ ಸಾರ್ವಜನಿಕರು ಕೈಜೋಡಿಸಿದರೆ ಇದನ್ನು ತಹಬದಿಗೆ ತರಲು ಸಾಧ್ಯವಾಗುತ್ತದೆ ಎಂದರು.



ಪ್ರತಿಯೊಬ್ಬರೂ ಕಡ್ಡಾಯವಾಗಿ ಮಾಸ್ಕ್ ಧರಿಸುವುದರ ಜತೆಗೆ ಸಾಮಾಜಿಕ ಅಂತರ ಕಾಪಾಡಿಕೊಂಡು ನಿಮ್ಮ ನೆರೆಹೊರೆಯವರಿಗೂ

> **ಕೊರೊನಾ ನಿಯಂತ್ರಿಸಲು ವೈದ್ಯರು, ನರ್ಸ್, ಆಶಾ ಕಾರ್ಯಕರ್ತೆಯರು ಸೇರಿದಂತೆ ಹಲವಾರು ಸಿಬ್ಬಂದಿ ಹಗಲು-ರಾತ್ರಿ ಎನ್ನದೆ ಕೆಲಸ ಮಾಡಿದ್ದಾರೆ. ಅವರ ಸೇವೆಗೆ ನಾನು ಚಿರಋಣಿಯಾಗಿದ್ದೇನೆ. ಇದಕ್ಕಾಗಿ ನಮ್ಮ ಸರ್ಕಾರ ವಿಶೇಷವಾಗಿ ಅವರನ್ನು ಅಭಿನಂದಿಸುವೆ.**
>
> **-ಬಿ.ಎಸ್.ಯಡಿಯೂರಪ್ಪ, ಸಿಎಂ**

ಇದರ ಬಗ್ಗೆ ಮನವರಿಕೆ ಮಾಡಿ ಎಂದು ಮನವಿ ಮಾಡಿದರಲ್ಲದೆ, ನಿಮ್ಮನ್ನೂ ಸೇರಿ ಇತರರನ್ನೂ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಕರ್ತವ್ಯ. ನಿಮ್ಮ ಮನೆ, ಕಚೇರಿ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛತೆಯಿಂದ ಇಟ್ಟುಕೊಳ್ಳಬೇಕು. ಇದರಿಂದ ಮಾತ್ರ ಸೋಂಕು ಹಬ್ಬುವುದನ್ನು ತಡೆಗಟ್ಟಲು ಸಾಧ್ಯವಾಗುತ್ತದೆ. ಸಾಮಾಜಿಕ ಜಾಗೃತಿ ಇಲ್ಲದಿದ್ದರೆ ಸರ್ಕಾರದ ಯಾವ ಕೆಲಸಗಳು ಯಶಸ್ವಿಯಾಗುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಇದಕ್ಕೂ ಮುನ್ನ ಬೆಳಗ್ಗೆ ವಿಧಾನಸೌಧದ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆ ಬಳಿಯಿಂದ ಕಬ್ಬನ್ ಪಾರ್ಕ್‌ವರೆಗೆ ಕಾಲ್ನಡಿಗೆ ಜಾಥಾ ನಡೆಸಿ ಮಾಸ್ಕ್ ಧರಿಸುವ ಕುರಿತಂತೆ ಜಾಗೃತಿ ಮೂಡಿಸಲಾಯಿತು. ಕಾಲ್ನಡಿಗೆ ಜಾಥಾದಲ್ಲಿ ಕ್ರಿಕೆಟ್ ಆಟಗಾರ ಅನಿಲ್ ಕುಂಬ್ಳೆ, ಚಿತ್ರನಟ ಪುನಿತ್ ರಾಜ್‌ಕುಮಾರ್, ನಟಿ ರಾಗಿಣಿ ದ್ವಿವೇದಿ, ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳ, ಡಾ.ಅಶ್ವತ್ಥ ನಾರಾಯಣ್, ಸಚಿವರಾದ ಆರ್.ಅಶೋಕ್, ಡಾ.ಕೆ.ಸುಧಾಕರ್, ಸಿ.ಟಿ.ರವಿ, ಎಸ್.ಟಿ.ಸೋಮಶೇಖರ್, ಸಂಸದರಾದ ಪಿ.ಸಿ.ಮೋಹನ್, ತೇಜಸ್ವಿ ಸೂರ್ಯ, ಮೇಯರ್ ಗೌತಮ್ ಕುಮಾರ್ ಮತ್ತಿತರರಿದ್ದರು.